ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	64
ಸದಸ್ಯರ ಹೆಸರು	:	ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ (ಪದವೀಧರ ಕ್ಷೇತ್ರದಿಂದ)
ಉತ್ತರಿಸುವ ದಿನಾಂಕ	:	09-07-2018
ಉತ್ತರಿಸುವವರು	:	ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು..

ಕ್ರ.ಸಂ.	ಪ್ರಶ್ನೆಗಳು	ಉತ್ತರಗಳು
ಅ	ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು "ಬಿ" ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ;	ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು ಗ್ರೂಪ್ "ಬಿ" ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.
ಆ	ಹಾಗಿದ್ದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು "ಬಿ" ದರ್ಜೆಗೇರಿಸುವ ಪ್ರಕ್ರಿಯೆ ಯಾವ ಹಂತದಲ್ಲಿದೆ?	ವಿಕೇಂದ್ರಿಕರಣ ವ್ಯವಸ್ಥೆಯಲ್ಲಿ ಗ್ರಾಮ ಪಂಚಾಯಿತಿಗಳಿಗೆ ಹೆಚ್ಚಿನ ಜವಾಬ್ದಾರಿ ಮತ್ತು ಪ್ರಕಾರ್ಯಗಳನ್ನು ನೀಡಲಾಗಿದೆ. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಇತರ ಇಲಾಖೆಗಳ ಅಧಿಕಾರಿಗಳೊಡನೆ ಸಮನ್ವಯ, ಮೇಲ್ವಿಚಾರಣೆ ಮಾಡುವ ಅಗತ್ಯವಿರುತ್ತದೆ. ಈ ಹಿನ್ನೆಲೆಯಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು ಗ್ರೂಪ್ "ಬಿ" ವೃಂದಕ್ಕೆ ಉನ್ನತೀಕರಿಸುವ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಕಳುಹಿಸಲಾಗಿತ್ತು. ಆರ್ಥಿಕ ಇಲಾಖೆಯ ಅಭಿಪ್ರಾಯದ ಮೇರೆಗೆ ಕರ್ನಾಟಕ ರಾಜ್ಯ ಆರನೇ ವೇತನ ಆಯೋಗದ ಮುಂದೆ ಶಿಫಾರಸ್ಸು ಕೋರಿ ಮಂಡಿಸಲಾಗಿತ್ತು. ಈ ಹುದ್ದೆಗಳ ಉನ್ನತೀಕರಣದ ಅವಶ್ಯಕತೆಯ ಬಗ್ಗೆ ಆರನೇ ವೇತನ ಆಯೋಗಕ್ಕೆ ಮನವರಿಕೆ ಮಾಡಲಾಗಿತ್ತು. ಪ್ರಸ್ತುತ ಆರನೇ ವೇತನ ಆಯೋಗ ಆರ್ಥಿಕ ಇಲಾಖೆಗೆ ತನ್ನ ಶಿಫಾರಸ್ಸು ಸಲ್ಲಿಸಿದ್ದು ಶಿಫಾರಸ್ಸಿನ ವಿವರಗಳು ನಮ್ಮ ಇಲಾಖೆಗೆ ಲಭ್ಯವಿರುವುದಿಲ್ಲ. ಈ ನಡುವೆ ಅಂದಿನ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆದೇಶದ ಮೇರೆಗೆ ವಿಷಯವನ್ನು ದಿನಾಂಕ: 27-03-2018 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಮಂಡಿಸಲಾಗಿತ್ತು. ಚುನಾವಣಾ ಮಾದರಿ ನೀತಿ ಸಂಹಿತೆ ಜಾರಿಯಾದ ಹಿನ್ನೆಲೆಯಲ್ಲಿ ಸಚಿವ ಸಂಪುಟವು ಯಾವುದೇ ನಿರ್ಣಯವನ್ನು ತೆಗೆದುಕೊಳ್ಳದೆ ವಿಷಯವನ್ನು ಮುಂದೂಡಿರುತ್ತದೆ. ಪ್ರಸ್ತುತ ಆರನೇ ವೇತನ ಆಯೋಗವು ಅಂತಿಮ ವರದಿ ನೀಡಿರುವುದಿರಂದ ವರದಿಯ ಅಭಿಪ್ರಾಯ ಆಧರಿಸಿ ಮುಂದಿನ ಕ್ರಮ ಜರುಗಿಸಲು ಕ್ರಮ ವಹಿಸಲಾಗುವುದು.
ಇ	ಈ ಹಿಂದಿನ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಮಂಚಾಯತ್ ರಾಜ್ ಸಚಿವರು ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು "ಬಿ" ದರ್ಜೆಗೇರಿಸಲಾಗುವುದೆಂದು ಹಲವು ಬಾರಿ ಪತ್ರಿಕಾ ಪ್ರಕಟಣೆ. ನೀಡಿದ್ದರೂ. ಇದುವರೆಗೂ ಸದರಿ ಹುದ್ದೆಯನ್ನು "ಬಿ" ದರ್ಜೆಗೇರಿಸದಿರುವುದಕ್ಕೆ. ಇರುವ ಅಡೆ-ತಡೆಗಳೇನು? (ವಿವರವಾದ ಮಾಹಿತಿ ನೀಡುವುದು)	
ಈ	ಯಾವ ಕಾಲಮಿತಿಯೊಳಗೆ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು "ಬಿ" ದರ್ಜೆಗೇರಿಸಲಾಗುವುದು?	ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು ಗ್ರೂಪ್ "ಬಿ" ದರ್ಜೆಗೇರಿಸಲು ಕಾಲಮಿತಿ ನಿರ್ದಿಷ್ಟಪಡಿಸಿರುವುದಿಲ್ಲ.

ಸಂಖ್ಯೆ. ಗ್ರಾಅಪ 640 ಗ್ರಾಪಂಅ 2018

(ಕೃಷ್ಣ ಬೈರೇಗೌಡ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್,
ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು
ಹಾಗೂ ಸಂಸದೀಯ ವ್ಯವಹಾರಗಳ ಸಚಿವರು.